ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 23/3/2021

# ರಾಜ್ಯದಲ್ಲಿ ಸದ್ಯಕ್ಕೆ ಲಾಕ್‌ಡೌನ್ ಇಲ್ಲ

ಉದಯ 23/3/21

ಬೆಂಗಳೂರು: ರಾಜ್ಯದಲ್ಲಿ ಕೊರೊನಾ ಎರಡನೇ ಅಲೆ ಹೆಚ್ಚಳವಾಗುತ್ತಿದ್ದರೂ ಸದ್ಯಕ್ಕೆ ಲಾಕ್‌ಡೌನ್ ಮಾಡದಿರಲು ಸಚಿವ ಸಂಪುಟ ನಿರ್ಧರಿಸಿದೆ. ಮತ್ತೆ ನಿರ್ಬಂಧ ಹೇರಬೇಕೋ, ಬೇಡವೋ ಎಂಬ ಬಗ್ಗೆ ಸಂಪುಟ ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಸಲಾಗಿದ್ದು ಯಾವುದೇ ಕಾರಣಕ್ಕೂ ಆರ್ಥಿಕ ಚಟುವಟಿಕೆಗಳನ್ನು ಸ್ಥಗಿತಗೊಳಿಸದಿರಲು ಸರ್ಕಾರ ನಿರ್ಧರಿಸಿದೆ. ಸೋಂಕಿನ ಪ್ರಮಾಣ ಹೆಚ್ಚಳವಾದರೆ ಬಿಗಿ ಕ್ರಮ ಕೈಗೊಂಡು, ಸೋಂಕು ಹರಡುವಿಕೆ ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಳ್ಳಲು ತೀರ್ಮಾನಿಸಲಾಗಿದೆ.

ಕೊರೊನಾ ಹೆಚ್ಚಳ ಪ್ರಮಾಣ ಕುರಿತು ಒಂದು ವಾರ ಕಾದುನೋಡಲು ಸರ್ಕಾರ ನಿರ್ಧರಿಸಿದ್ದು ಪರಿಸ್ಥಿತಿ ನೋಡಿಕೊಂಡು ಮುಂದಿನ ತೀರ್ಮಾನ ಕೈಗೊಳ್ಳಲು ಮುಂದಾಗಿದೆ ಎಂದು ತಿಳಿದು ಬಂದಿದೆ.

**ಶಾಲೆ-ಕಾಲೇಜು ಸ್ಥಗಿತವಿಲ್ಲ:** ಇದೇ ವೇಳೆ, ಈಗಾಗಲೇ ಆರಂಭವಾಗಿರುವ ಶಾಲಾ, ಕಾಲೇಜುಗಳನ್ನು ಯಾವುದೇ ಕಾರಣಕ್ಕೂ ಸ್ಥಗಿತ ಮಾಡುವುದಿಲ್ಲ, ಆಫ್‌ಲೈನ್, ಆನ್‌ಲೈನ್ ತರಗತಿಗಳು ಶೈಕ್ಷಣಿಕ ವೇಳಾಪಟ್ಟಿಯಂತೆ ನಡೆಯಲಿದೆ ಎಂದು ಉಪಮುಖ್ಯಮಂತ್ರಿ ಡಾ.ಅಶ್ವತ್ಥನಾರಾಯಣ ಸ್ಪಷ್ಟಪಡಿಸಿದ್ದಾರೆ.

**ಡೋಸ್ ಅವಧಿ ಹೆಚ್ಚಳ:** ಕೊವಿಶೀಲ್ಡ್ ಲಸಿಕೆಯ ಮೊದಲ ಡೋಸ್ ಪಡೆದ ಬಳಿಕ ಎರಡನೇ ಡೋಸ್ ಪಡೆಯಲು ಇರುವ ಅವಧಿಯನ್ನು ಈಗಿನ 28 ದಿನಗಳ ಬದಲಾಗಿ 6-8 ವಾರಗಳಿಗೆ ಹೆಚ್ಚಿಸಬೇಕು ಎಂದು ಎಲ್ಲ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಕೇಂದ್ರ ಸರ್ಕಾರ ಪತ್ರ ಬರೆದಿದೆ. ಕೊವ್ಯಾಕ್ಸಿನ್ ಲಸಿಕೆಗೆ ಈ ನಿಯಮ ಅನ್ವಯವಾಗದು ಎಂದೂ ಸ್ಪಷ್ಟಪಡಿಸಿದೆ.